ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಶುಲ್ಕ ಮರುಪಾವತಿ ಕುರಿತು

968 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?*

ಆ) *ಶುಲ್ಕ ಮರುಪಾವತಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?*

ಇ) *ವಿದ್ಯಾರ್ಥಿಗಳಿಗೆಲ್ಲಾ ಈ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ?*

ಈ) *ಒಂದು ವರ್ಷಕ್ಕೆ ಈ ಉದ್ದೇಶಕ್ಕಾಗಿ ಬಜೆಟ್‌ನಲ್ಲಿ ಮೀಸಲಿಡಲಾದ ಮೊತ್ತ ಎಷ್ಟು?*

ಉ) *ಬಜೆಟ್‌ನಲ್ಲಿ ಹೆಚ್ಚು ಹಣವನ್ನು ಮೀಸಲಿಟ್ಟು ಎಲ್ಲಾ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುವುದೆ?*

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಕರ್ನಾಟಕ ರಾಜ್ಯದಲ್ಲಿ 1998-99ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ 4496 ಪರಿಶಿಷ್ಟ ಜಾತಿ ಹಾಗೂ 986 ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದರು.

ಆ) 1999-2000ನೇ ಸಾಲಿನಲ್ಲಿ ಒಟ್ಟು 76 ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ 1460 ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗಾಗಿ ಅರ್ಜಿ ಸಲ್ಲಿಸಿರುತ್ತಾರೆ.

ಇ) ಅನುದಾನದ ಕೊರತೆಯಿಂದಾಗಿ ಎಲ್ಲಾ ವಿದ್ಯಾರ್ಥಿಗಳಿಗೂ ಈ ಸೌಲಭ್ಯವನ್ನು ಕಲ್ಪಿಸಲು ಸಾಧ್ಯವಾಗುತ್ತಿಲ್ಲ.

ಈ) 1999-2000ನೇ ಸಾಲಿನಲ್ಲಿ ರೂ. 15.89 ಲಕ್ಷ ಬಜೆಟ್ ನಿಗಧಿಗೊಳಿಸಲಾಗಿತ್ತು.

ಉ) ಸಾಕಷ್ಟು ಅನುದಾನವನ್ನು ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು.

ಇಂಜಿನಿಯರಿಂಗ್ ಕಾಲೇಜಿನ ಶಿಕ್ಷಕರ ವೇತನ ಪರಿಷ್ಕರಣೆ

969 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಇಂಜಿನಿಯರಿಂಗ್ ಕಾಲೇಜಿನ ಶಿಕ್ಷಕರು ಪರೀಕ್ಷೆಗಳನ್ನು ಬಹಿಷ್ಕರಿಸಿ ಮುಷ್ಕರ ಹೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*